# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:07.01.2023 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.40 (ವೀರಮದಕರಿ) ರಲ್ಲಿ ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದವರು:-**

| ಕ್ರಮ ಸಂಖ್ಯೆ | ಅಧ್ಯಕ್ಷರು / ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ನಾಗಭೂಷಣ್ ಜಿ. | ಸ.ಕಾ.ನಿ.ಅ., ಎಡಿಟಿಪಿ, ವಾರ್ಡ್ ನೋಡಲ್ ಅಧಿಕಾರಿಗಳು |
| 2 | ಪೂಜಾಶ್ರೀ ಆರ್. | ಸಹಾಯಕ ಅಭಿಯಂತರರು, |
| 3 | ಡಾ|| ಲೀಲಾವತಿ ಎಸ್. | ವೈದ್ಯಾಧಿಕಾರಿಗಳು, ಪ್ರಾ. ಆ. ಕೇಂದ್ರ |
| 4 | ಎಂ. ಅನಿತಾ ರಾಜು | ಕಿರಿಯ ಆರೋಗ್ಯ ಪರಿವೀಕ್ಷಕರು |
| 5 | ಭರತ್ ಕುಮಾರ್ ಎನ್. | ಕಿರಿಯ ಆರೋಗ್ಯ ಪರಿವೀಕ್ಷಕರು |
| 6 | ಜಾನ್ಸನ್ | ಸೂಪರ್‌ವೈಸರ್ |
| 7 | ರಾಜು ಆರ್. | ವಾರ್ಡ್ ಮಾರ್ಷಲ್ |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

**1) ಕಾಮಗಾರಿ ಇಲಾಖೆ:**

ಹೆಚ್‌ಎಂಟಿ ಮುಖ್ಯರಸ್ತೆಯ ಬಿಎಫ್ ಡಬ್ಲ್ಯೂ ಯಿಂದ ಪೋಸ್ಟ್ ಆಫೀಸ್ ವರೆಗೆ ರೋಡ್ ಹಂಪ್ ಇಲ್ಲದೇ ಇರುವ ಕಾರಣ ಅಪಘಾತ ಆಗುವ ಸಂಭವವಿರುವುದರಿಂದ ರೋಡ್ ಹಂಪ್ ನಿರ್ಮಿಸಿಕೊಡಲು ಹಾಜರಿದ್ದ ಜಾಲಹಳ್ಳಿ ಗ್ರಾಮಸ್ಥರು ನೋಡಲ್ ಅಧಿಕಾರಿಗೆ ಹೇಳಿದರು. ನೋಡಲ್ ಅಧಿಕಾರಿಗಳು ಟಿಇಸಿ ಗೆ ಪತ್ರ ಬರೆಯಲು ಸಹಾಯಕ ಅಭಿಯಂತರರಿಗೆ ತಿಳಿಸಿದರು.

ವಾರ್ಡ್ ವ್ಯಾಪ್ತಿಯ ರಸ್ತೆ ಗುಂಡಿಗಳನ್ನು ಹೆಚ್ಚಾಗಿದ್ದು, ಅದನ್ನು ಮುಚ್ಚಿಸಲು ನೋಡಲ್ ಅಧಿಕಾರಿಗೆ ಜಾಲಹಳ್ಳಿ ಗ್ರಾಮಸ್ಥರು ಹೇಳಿದರು.

**2) ಆರೋಗ್ಯ ಇಲಾಖೆ:**

ಹಾಜರಿದ್ದ ಜಾಲಹಳ್ಳಿಯ ಪ್ರಾ.ಆ.ಕೇಂ.ದ ವೈದ್ಯಾಧಿಕಾರಿಗಳು, ಆಸ್ಪತ್ರೆ ಮುಂದಿನ ಡ್ರೈನೇಜ್ ನ್ನು ಸರಿಪಡಿಸಲು ಮತ್ತು ಟಾಯ್ಲೆಟ್, ಕೊಠಡಿಗಳು ಬೇಕಾಗಿದ್ದು ಮತ್ತು ಆಸ್ಪತ್ರೆ ಹೊರಾಂಗಣ ರಿಪೇಂಟಿಂಗ್ ಮಾಡಿಸಿಕೊಡಲು ನೋಡಲ್ ಅಧಿಕಾರಿಗೆ ತಿಳಿಸಿದರು. ನೋಡಲ್ ಅಧಿಕಾರಿಯು ಮುಂದಿನ ಬಜೆಟ್‌ನಲ್ಲಿ ಸೇರಿಸಲು ಸೂಚಿಸಿದರು.

ಕೊನೆಯದಾಗಿ, ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆ / ದೂರುಗಳನ್ನು ದಾಖಲಿಸಲು ವಾರ್ಡ್ ನಲ್ಲಿ ದೂರು ದಾಖಲಿಸುವ ಪುಸ್ತಕ ಲಭ್ಯವಿರುವಂತೆ ನೋಡಿಕೊಂಡು ಬರುವ ದೂರುಗಳನ್ನು ಆದ್ಯತೆಯ ಮೇರೆಗೆ ಕ್ರಮವಹಿಸುವಂತೆ ಹಾಗೂ ಪ್ರತಿ ವಾರ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮುಂದುವರೆಸುಂತೆ ಸೂಚಿಸುತ್ತಾ, ಸಕಾಲದಲ್ಲಿ ಸಾರ್ವಜನಿಕ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ಕೈಗೊಂಡು ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Poojashree. R
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:40

(ನಾಗಭೂಷಣ್ ಜಿ.)
ಸ.ಕಾ.ನಿ.ಅ. ಎಡಿಟಿಪಿ ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:40